# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/03/2020–21 ದಿನಾಂಕ: 07/11/2020.

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020–21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 07/11/2020 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಾರ್ಡ್ ಸಮಿತಿ ಸದಸ್ಯರು**

1. ಶ್ರೀ ಅಮರ್ ಸಿಂಗ್, ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು
2. ಶ್ರೀ ವಿಜಯ್ ಬೆನಗಿ, ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು
3. ಶ್ರೀ ಸುಜಿತ್ ಸೋನಿಲ್, ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರು
4. ಶ್ರೀ ಪ್ರಕಾಶ್ ಕೆ, ಸದಸ್ಯರು
5. ಶ್ರೀ ದಯಾಳ್, ಸದಸ್ಯರು
6. ಶ್ರೀ ಶ್ರೀನಿವಾಸ್, ಸದಸ್ಯರು
7. ಶ್ರೀ ಆರ್.ಎಂ. ಶ್ರೀನಿವಾಸ್, ಸದಸ್ಯರು
8. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
9. ಶ್ರೀ ಮಲ್ಯಾದಿ, ಸದಸ್ಯರು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀ ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀಮತಿ ಡಾ ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ
4. ಶ್ರೀಮತಿ ಡಾ॥ ಗೌತಮಿ, ಆರೋಗ್ಯ ವೈದ್ಯಾಧಿಕಾರಿ
5. ಶ್ರೀ ಬಸವರಾಜ್, ಸಹಾಯಕ ಕಂದಾಯ ಅಧಿಕಾರಿ
6. ಶ್ರೀ ಬಾಬುರೆಡ್ಡಿ, ಸಹಾಯಕ ಅಭಿಯಂತರರು (ವಿದ್ಯುತ್)
7. ಶ್ರೀ ಭೂಷಣ್, ಸಹಾಯಕ ಅಭಿಯಂತರರು (ಕೆರೆಗಳು)
8. ಶ್ರೀ ನಾರಾಯಣಸ್ವಾಮಿ, ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)
9. ಶ್ರೀ ಮಹೇಶ್ ಕುಮಾರ್ ಎಲ್, ಕಿರಿಯ ಆರೋಗ್ಯ ಪರಿವೀಕ್ಷಕರು
10. ಶ್ರೀ ಸುರೇಶ್ ಈ.ಎಸ್, ಬಿಬಿಎಂಪಿ ಮಾರ್ಷಲ್
11. ಶ್ರೀ ಪ್ರಕಾಶ್ ಕೆ, ಸದಸ್ಯರು
12. ಶ್ರೀ ದಯಾಳ್, ಸದಸ್ಯರು
13. ಶ್ರೀ ಶ್ರೀನಿವಾಸ್, ಸದಸ್ಯರು
14. ಶ್ರೀ ಮಲ್ಯಾದಿ, ಸದಸ್ಯರು

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:–** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಶ್ರೀಮತಿ ಡಾ|| ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:–** ಕೋವಿಡ್ 19 ಗೆ ಸಂಬಂಧಿಸಿದಂತೆ ವಾರ್ಡ್ ನಂ 10ರ ವ್ಯಾಪಿಯಲ್ಲಿ ಪ್ರತಿ ದಿನ ನಾಗರೀಕರನ್ನು ಪರೀಕ್ಷೆ ಮಾಡಲಾಗಿ 15 ರಿಂದ 20 ಜನರಿಗೆ ಸೋಂಕು ಪತ್ತೆ ಆಗಿರುವ ಪ್ರಕರಣಗಳು ಕಂಡು ಬಂದಿರುತ್ತದೆ. ವಸತಿ ಸಮುಚ್ಚಯದ ನಿವಾಸಿಗಳಿಗೆ ಹಾಗೂ ಅಂಗಡಿ ಮಾಲೀಕರಿಗೂ ಸಹ ಕಡ್ಡಾಯವಾಗಿ ಕೋವಿಡ್ ಪರೀಕ್ಷೆ ಮಾಡಿಸಿಕೊಳ್ಳಲು ಹಾಗೂ ಕೋವಿಡ್ ಬಗ್ಗೆ ಜನರಲ್ಲಿ ಅರಿವು ಮೂಡಿಸಿ ಕೋವಿಡ್ ಸೋಂಕು ಹರಡದಂತೆ ತಡೆಗಟ್ಟಲು ಮುಂಜಾಗ್ರತಾ ಕ್ರಮ ಕೈಗೊಳ್ಳಲು ತಿಳಿಸಿರುತ್ತಾರೆ. **ಕೋವಿಡ್ ಟೆಸ್ಟ್‌ಗಳ ಸಂಖ್ಯೆಯನ್ನು ವಸತಿ ಸಮುಚ್ಛಯದಲ್ಲಿ ಹೆಚ್ಚಿಸಬೇಕೆಂದು ಮನವಿ ಮಾಡಿರುತ್ತಾರೆ.**

**ಶ್ರೀ. ದಯಾಳ್, ಸದಸ್ಯರು:–** ದೊಡ್ಡಬೊಮ್ಮಸಂದ್ರ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪಾಸಿಟಿವ್ ಬಂದಂತಹ ಪೇಶಂಟ್‌ಗಳನ್ನು ಬಿ.ಬಿ.ಎಂ.ಪಿ ಕಂಟ್ರೋಲ್ ರೂಮ್ ಕಡೆಯಿಂದ ಚಿಕಿತ್ಸೆಗಾಗಿ ಅಡ್ಮಿಟ್ ಮಾಡಿದಾಗ ಸದರಿ ಆಸ್ಪತ್ರೆಗಳಲ್ಲಿ ಸೋಂಕಿತರಿಗೆ ಬೇರೆ ಖಾಯಿಲೆ (ಶುಗರ್, ಬಿ.ಪಿ ಹಾಗೂ ಇತ್ಯಾದಿ) ಇದ್ದರೂ ಸಹ ಅದರ ಬಗ್ಗೆ ವಿಚಾರಿಸದೇ ಬರೀ ಕೋವಿಡ್‌ಗೆ ಸಂಬಂಧಿಸಿದಂತೆ ಚಿಕಿತ್ಸೆ ನೀಡುತ್ತಿರುತ್ತಾರೆ. ಆದುದರಿಂದ ಸದರಿಯವರ ಆರೋಗ್ಯದಲ್ಲಿ ತೊಂದರೆಯಾಗುತ್ತಿರುವುದರಿಂದ ಕೂಲಂಕುಷವಾರಿ ಪರೀಕ್ಷಿಸಿ ಮಾನವೀಯತೆ ಯಿಂದ ನೋಡಿಕೊಳ್ಳಲು ಕೋರಿರುತ್ತಾರೆ.

**ಬೇಬಿ ರಾಣಿ, ಶ್ರೀನಿವಾಸ್, ಮಲ್ಯಾದ್ರಿ, ಸದಸ್ಯರು:–** ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಆಟೋ ಮೂಲಕ ಬರುವ ಆಟೋ ಟಿಪ್ಪರ್‌ಗಳಿಗೆ ವಿಷಲ್ ಮೂಲಕ ಮನೆ ಮನೆಯಿಂದ ಕಸ ಹಾಕಲು ತಿಳಿಸಲು ಹಾಗೂ ಪ್ರತಿದಿನ ಒಂದೇ ಸಮಯವನ್ನು ಪಾಲಿಸಬೇಕೆಂದು ಕೋರಿರುತ್ತಾರೆ.

**ಮಲ್ಯಾದ್ರಿ, ಪಿ. ಪ್ರಕಾಶ್, ದಯಾಳ್, ಸದಸ್ಯರು:–**

1. ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಬರುವ ಕೆರೆಯಲ್ಲಿ ಕೋಡಿ ಜಾಗದಲ್ಲಿ ಕೆರೆ ನೀರು ತುಂಬಿ ಹೋಗುವ ಜಾಗದಲ್ಲಿ ಮಣ್ಣು ಕ್ರೋಢೀಕೃತವಾಗಿರುವುದರಿಂದ ಬೃಹತ್ ಮಳೆ ನೀರುಗಾಲುವೆ ಮೂಲಕ ನೀರು ಹಿಂಬದಿ ಹರಿಯುತ್ತಿದ್ದು, ಆದ್ದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಫ್ಲಡ್ ಆಗುತ್ತಿರುತ್ತದೆ. ಆದುದರಿಂದ ಸದರಿ ಮಣ್ಣನ್ನು ತೆಗೆಸಿಕೊಡಲು ಕೋರಿರುತ್ತಾರೆ.
2. ವೇಮಣ್ಣ ಲೇಔಟ್, ಕಾಟೇರಮ್ಮ ಲೇಔಟ್, ಚಾಮುಂಡೇಶ್ವರಿ ಲೇಔಟ್ ಪ್ರದೇಶಗಳಿಂದ ಬರುವ ಮಳೆ ನೀರನ್ನು ಬೃಹತ್ ಮಳೆ ನೀರುಗಾಲುವೆ ಮೂಲಕ ನೇರವಾಗಿ ಕೆರೆಗೆ ಸಂಪರ್ಕ ಕಲ್ಪಿಸಲು ಕೋರಿರುತ್ತಾರೆ.
3. ಸೆಂಟ್ ಫಿಲೋಮಿನಾ ಶಾಲೆಯ ಪಕ್ಕದ ಬದಿಯಲ್ಲಿರುವ ಮಳೆ ನೀರುಗಾಲುವೆಯ ನೀರನ್ನು ರಸ್ತೆಗೆ ಬಿಟ್ಟಿರುವುದರಿಂದ ಸದರಿ ಪ್ರದೇಶದಲ್ಲಿ ಫ್ಲಡ್ ಆಗುತ್ತಿರುತ್ತದೆ. ಆದ್ದರಿಂದ ಸದರಿ ಬೃಹತ್ ಮಳೆ ನೀರುಗಾಲುವೆಯ ಸಂಪರ್ಕವನ್ನು ದುರಸ್ಥಿಗೊಳಿಸಲು ಕ್ರಮಕೈಗೊಳ್ಳಲು ಕೋರಿರುತ್ತಾರೆ.

ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

Sueetha .N L 7/11/20
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 10, ದೊಡ್ಡಬೊಮ್ಮಸಂದ್ರ

7/11/2020
ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೆರೆಗಳು) ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.